ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಪ್ರಾಚಾರ್ಯರ ಹುದ್ದೆಗಳ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

59 (169) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಚಾರ್ಯರ ಹುದ್ದೆಗಳ ಸಂಖ್ಯೆ ಎಷ್ಟು; ನೇರ ನೇಮಕಾತಿ ಮತ್ತು ಅರ್ಹ ಉಪನ್ಯಾಸಕರಿಂದ ಬಡ್ತಿ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಕ್ರಮ ಕೈಗೊಂಡಿದ್ದಲ್ಲಿ ಬಡ್ತಿಗೆ ಮೀಸಲಿರುವ ಎಷ್ಟು ಪ್ರಾಚಾರ್ಯರ ಹುದ್ದೆಗಳಿಗೆ ಬಡ್ತಿ ನೀಡಲಾಗಿದೆ; ನೀಡದಿದ್ದಲ್ಲಿ, ಸದರಿ ಪ್ರಕ್ರಿಯೆಯನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು ;

(ಆ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಈಗಿರುವ ವೃಂದ ಮತ್ತು ನೇಮಕಾತಿ ನಿಯಮಾವಳಿಗಳೇನು; ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಲ್ಲಿ ನೇರ ನೇಮಕಾತಿ ಮೂಲಕ ಎಷ್ಟು ಪ್ರಾಚಾರ್ಯರ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ ? (ಆದೇಶದ ಪ್ರತಿ ನೀಡುವುದು)